**ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ. ಎಂ. ಎಫ್.ಸಿ., ನ್ಯಾಯಾಲಯ ಚನ್ನಪಟ್ಟಣ ಚನ್ನಪಟ್ಟಣ.**

**ಸಿ.ಸಿ. ಸಂಖ್ಯೆಃ123.2019**

ಚಾಸಾಃ 9 ಪ್ರಾಸಾಃ7

| | | |
|---|---|---|
| ಹೆಸರು | : | ಸಿ.ಸತೀಶ್ |
| ಗಂಡನ/ತಂದೆಯ ಹೆಸರು | : | ಚಿಕ್ಕಯ್ಯ |
| ವಯಸ್ಸು | : | 46 ವರ್ಷ |
| ಉದ್ಯೋಗ | : | ಪೋಲಿಸ್ ಇನ್ಸ್ ಪೆಕ್ಟರ್, ಬಿಡಿಎ ಬೆಂಗಳೂರು |
| ವಾಸ | : | ಬೆಂಗಳೂರು. |

**ದಿನಾಂಕ 21.02.2026 ರಂದು ಸಾಕ್ಷಿಯನ್ನು ಕರೆಸಲಾಯಿತು. ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯವಿಚಾರಣೆಃ ಮಾನ್ಯ ಎಪಿಪಿ ಯವರಿಂದಃ**

ನಾನು 07.05.2015 ರಿಂದ 21.04.2016 ರವರೆಗೆ ಎಂ.ಕೆ.ದೊಡ್ಡಿ ಪೊಲೀಸ್ ಠಾಣೆಯಲ್ಲಿ ಪಿ ಎಸ್ ಐ ಯಾಗಿ ಕರ್ತವ್ಯ ನಿರ್ವಹಿಸಿದ್ದೇನೆ.

ದಿನಾಂಕ 15.02.2016 ರಂದು ಈ ಕೇಸಿನ ಕಡತವನ್ನು ಚಾಸಾ-8 ರವರಿಂದ ಪಡೆದುಕೊಂಡು ಮುಂದಿನ ತನಿಖೆಯನ್ನು ಕೈಗೊಂಡಿರುತ್ತೇನೆ. ಅದೇ ದಿನ ಚಾಸಾ-2 ಮತ್ತು 4 ರವರ ಹೇಳಿಕೆಗಳನ್ನು ಪಡೆದು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ದಿಃ16.02.2016 ರಂದು ಚಾಸಾ-3 ರವರ ಹೇಳಿಕೆಗಳನ್ನು ಪಡೆದು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ.ದಿಃ03.03.2016 ರಂದು ಚಾಸಾ1ರವರ ಗಾಯದ ಪ್ರಮಾಣ ಪತ್ರವನ್ನು ಸಾರ್ವಜನಿಕ ಆಸ್ಪತ್ರೆ, ಚನ್ನಪಟ್ಟಣ ರವರಿಂದ ಪಡೆದು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸದರಿ ಗಾಯದ ಪ್ರಮಾಣ ಪತ್ರವನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು. ದಿಃ18.03.2016 ರಂದು ಆರೋಪಿತರ ಮೇಲೆ ಸಾಕ್ಷ್ಯಾಧಾರಗಳು ಕಂಡು ಬಂದ ಕಾರಣ ದೋಷಾರೋಪಣಾ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ  ಆರ್ ಕೆ ಆರ್  ವಕೀಲರಿಂದಃ**

ನಾನು ಯಾವುದೇ ಸಾಕ್ಷಿದಾರರ ಹೇಳಿಕೆಯನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಚಾಸಾ1 ರವರಿಗೆ ಅನುಕೂಲವಾಗಲೀ ಎಂದು ಮತ್ತು  ಆರೋಪಿತರು ಯಾವುದೇ ತಪ್ಪು ಮಾಡದೇ ಇದ್ದರೂ ಸುಳ್ಳು ಆರೋಪ ಪಟ್ಟಿಯನ್ನು ಸಲ್ಲಿಸಿರುತ್ತೇನೆಂದರೆ ಸುಳ್ಳು.

**ಮರುವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)**Na**

ಓ.ಹೇ.ಕೇ.ಸ.ಒ

**(ವೆಂಕಟೇಶಪ್ಪ. ವಿ)**
**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ.,ಚನ್ನಪಟ್ಟಣ.**